# ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ..... ಚಿತ್ತಾಪೂರ

C.C No. 62/2017
CW-01 PW-01

ಹೆಸರು ಃ ಅನ್ನಪೂರ್ಣ ಬಸಲಿಂಗ

ಗಂಡನ ಹೆಸರು ಃ ಶಂಕರಾವ

ವಯಸ್ಸು ಃ 50 ವರ್ಷ

ಉದ್ಯೋಗ ಃ ಗೃಹಿಣಿ

ವಾಸ ಸ್ಥಳ ಃ ಕೋರವಾರ ಗ್ರಾಮ, ತಾಃ ಕಾಳಗಿ

---

**ಪ್ರಮಾಣವಚನ ಭೋಧಿಲಾಯಿತು. ದಿಃ 23-04-2024**

**ಮುಖ್ಯ ವಿಚಾರಣೆಃ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರಿಂದ**

ನನಗೆ ಚಾಸಾಃ 02 ರಿಂದ 06 ರವರ ಪರಿಚಯ ಇರುತ್ತದೆ. ಅದೇ ರೀತಿ ಚಾಸಾಃ 08 ಮತ್ತು 09 ರವರ ಪರಿಚಯ ನನಗೆ ಇರುತ್ತದೆ. ನ್ಯಾಯಾಲಯದ ಮುಂದೆ ಇರುವ ಆರೋಪಿಯನ್ನು ನಾನು ನೋಡಿದ್ದು ಆತನು ನಮ್ಮ ಊರಿನವನೇ ಆಗಿರುತ್ತಾನೆ. ಈ ಪ್ರಕರಣದ ಕುರಿತು ನನಗೆ ಯಾವುದೇ ಮಾಹಿತಿ ಇರುವುದಿಲ್ಲ.

ಸುಮಾರು 8 ವರ್ಷಗಳ ಹಿಂದೆ ನನ್ನ ಗಂಡನಾದ ಶಂಕರಾವ ಹಾಗೂ ವಿಶ್ವನಾಥ ಇವರು ಕೂಡಿಕೊಂಡು ಒಂದು ಮೋಟಾರ ಸೈಕಲನಲ್ಲಿ ಗುಂಡುಗುರ್ತಿ ಗ್ರಾಮಕ್ಕೆ ಒಂದು ಕಾರ್ಯಕ್ಕೆ ಹೋಗಿ ವಾಪಸ್ ಬರುತ್ತಿರುವಾಗ, ಸದರಿಯವರಿಗೆ ಅಪಘಾತವಾಗಿದ್ದು ಅವರಿಬ್ಬರೂ ಮೃತಪಟ್ಟಿರುತ್ತಾರೆ. ಸದರಿ ಅಪಘಾತ ಯಾರ ತಪ್ಪಿನಿಂದ ಆಯಿತು ಮತ್ತು ಹೇಗೆ ಆಯಿತು ಎಂದು ನನಗೆ ಗೊತ್ತಿರುವುದಿಲ್ಲ.

ನಾನು ಸದರಿ ವಿಷಯ ತಿಳಿದ ನಂತರ ಸ್ಥಳಕ್ಕೆ ಹೋದಾಗ ನನ್ನ ಗಂಡ ಮತ್ತು ವಿಶ್ವನಾಥ ಇಬ್ಬರು ಮೃತಪಟ್ಟಿರುತ್ತಾರೆ.

ಅಪಘಾತದ ವಿಷಯವನ್ನು ತಿಳಿಸಲು ನಾನು ಪೊಲೀಸ ಠಾಣೆಗೆ ಹೋದಾಗ ಪೊಲೀಸರು ಒಂದು ದಾಖಲೆಗೆ ನನ್ನ ಎರಡು ಹೆಬ್ಬೆಟ್ಟಿನ ಗುರುತುಗಳನ್ನು ಪಡೆದಿರುತ್ತಾರೆ. ಸಾಕ್ಷಿಯು ಲಿಖಿತ ದೂರಿನಲಿರುವ ತನ್ನ ಎರಡು ಹೆಬ್ಬೆಟ್ಟಿನ ಗುರುತುಗಳನ್ನು ನೋಡಿ ಗುರುತಿಸಿದ್ದು, ಸದರಿ ಲಿಖಿತ ದೂರನ್ನು ನಿಪಿ-1 ಎಂದು ಗುರುತಿಸಲಾಯಿತು. ನಿಪಿ-1 ರಲ್ಲಿ ಬರೆದಿರುವ ವಿಷಯಗಳು ನನಗೆ ಗೊತ್ತಿರುವುದಿಲ್ಲ.

ಪೊಲೀಸರು ನನಗೆ ಯಾವತ್ತು ಠಾಣೆಗೆ ಕರೆಸಿರುವುದಿಲ್ಲ ಹಾಗೂ ನ್ಯಾಯಾಲಯದ ಮುಂದೆ ಇರುವ ಆರೋಪಿಯನ್ನು ತೋರಿಸಿ, ಇತನೇ ಅಪಘಾತಪಡಿಸಿರುತ್ತಾನೆ ಎಂದು ನನ್ನ ಹೇಳಿಕೆಯನ್ನು ಪಡೆದುಕೊಂಡಿರುವುದಿಲ್ಲ.

(ಮಾನ್ಯ ಸ ಸ ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ದಾಖಲೆಗಳನ್ನು ಪರಿಶೀಲಿಸಿ ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ನೀಡಲಾಯಿತು.)

**<u>ಪಾಟೀ ಸವಾಲುಃ ಸ.ಸ.ಅಭಿಯೋಜಕರವರಿಂದ</u>**

ದಿಃ 21-12-2016 ರಂದು ಪೊಲೀಸರು ನನಗೆ ಠಾಣೆಗೆ ಕರೆಸಿ, ಆರೋಪಿಯನ್ನು ತೋರಿಸಿ, ಅಪಘಾತವನ್ನು ನ್ಯಾಯಾಲಯದ ಮುಂದೆ ಇರುವ ಆರೋಪಿಯೇ ಅಪಘಾತಪಡಿಸಿರುತ್ತಾನೆ ಎಂದು ತಿಳಿಸಿ, ನನ್ನ ಹೇಳಿಕೆ ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಸಾಕ್ಷಿಯ ಹೇಳಿಕೆಯನ್ನು ನಿಪಿ-2 ಎಂದು ಗುರುತಿಸಲಾಯಿತು.

ದಿಃ 07-10-2016 ರಂದು ರಾತ್ರಿ 10.20 ರ ಸಮಯದಲ್ಲಿ ನ್ಯಾಯಾಲಯದ ಮುಂದೆ ಇರುವ ಆರೋಪಿಯು ತನ್ನ ಬುಲೋರೋ ವಾಹನ ನಂಃ ಕೆಎ-32 ಸಿ-1306 ನೇದ್ದನ್ನು ಕಲಬುರಗಿಯಿಂದ ಸೇಡಂ ಕಡೆಗೆ ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ಎದುರಿನಿಂದ ಬರುತ್ತಿದ್ದ ಮೋಟಾರ ಸೈಕಲ್ ನಂಃ ಕೆಎ-25

ಕ್ಯೂ:8522 ನೇದ್ದಕ್ಕೆ ಡಿಕ್ಕಿಪಡಿಸಿ ವಾಹನ ಸಮೇತ ಓಡಿ ಹೋಗಿರುತ್ತಾನೆ ಎಂದರೆ ಸರಿಯಲ್ಲ. ಸದರಿ ಅಪಘಾತದ ಪರಿಣಾಮ ಮೋಟಾರ ಸೈಕಲ್ ಸವಾರ ವಿಶ್ವನಾಥ ಚೇಂಗಟಾ ಹಾಗೂ ನನ್ನ ಗಂಡ ಶಂಕರಾವ ಇವರಿಗೆ ತೀವ್ರ ಸ್ವರೂಪದ ರಕ್ತಗಾಯಗಳಾಗಿ ಸದರಿಯವರು ಸ್ಥಳದಲ್ಲಿಯೇ ಮೃತಪಟ್ಟಿರುತ್ತಾರೆ ಎಂದರೆ ಸರಿಯಲ್ಲ. ಅಪಘಾತವು ನ್ಯಾಯಾಲಯದ ಮುಂದೆ ಇರುವ ಆರೋಪಿಯೇ ಮಾಡಿರುತ್ತಾನೆ ಎಂದರೆ ಸರಿಯಲ್ಲ. ನಿಪಿ-1 ಮತ್ತು 2 ಗಳಲ್ಲಿ ಬರೆದಿರುವ ವಿಷಯಗಳು ನನಗೆ ಗೊತ್ತಿರುತ್ತವೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ನಾನು ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ.ಎಸ್.ಎನ್.ಪಿ.ವಕೀಲರಿಂದ - ಏನು ಇಲ್ಲಾ**

**ಮರು ವಿಚಾರಣೆ ಇಲ್ಲಾ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು )

ಓ. ಹೇ ಕೇ.ಸರಿ ಇದೆ.

ಸಿವಿಲ್ & J.M.F.C ನ್ಯಾಯಾಧೀಶರು, ಚಿತ್ತಾಪೂರ.